# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 01-05-2026 to 07-05-2026 ಬೆಲೆ:10-00 ಸಂಪುಟ–1 ಸಂಚಿಕೆ–31 ಪುಟಗಳು–6









ನಾಡಿನ ಪವಿತ್ರ ಕ್ಷೇತ್ರ ಧರ್ಮಸ್ಥಳದಲ್ಲಿ ನಡೆದ 54ನೇ ವರ್ಷದ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ 106 ಜೊತೆ ವಧೂ–ವರರು ದಾಂಪತ್ಯ ಜೀವನಕ್ಕೆ ಪಾದಾರ್ಪಣೆ ಮಾಡಿದರು. ಬೆಳಿಗ್ಗೆ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಹಾಗೂ ಕುಟುಂಬದವರು ವರನಿಗೆ ಧೋತಿ, ಶಾಲು ಹಾಗೂ ವಧುವಿಗೆ ಸೀರೆ, ಮೂಗುತಿ ಮತ್ತು ರವಿಕೆ ಕಣ ವಿತರಿಸಿದರೆ, ಸಂಜೆ ವಧೂ–ವರರು ಭವ್ಯ ಮೆರವಣಿಗೆಯಲ್ಲಿ ದೇವಸ್ಥಾನದ ಬಳಿಯಿಂದ ಮದುವೆ ಮಂಟಪಕ್ಕೆ ಆಗಮಿಸಿದರು. ಗೋಧೂಳಿ ಲಗ್ನದ ಸುಮುಹೂರ್ತದಲ್ಲಿ ವೇದಘೋಷ, ಮಂಗಳವಾದ್ಯ, ಹಾರ ವಿನಿಮಯ, ಮಂತ್ರಾಕ್ಷತೆಯೊಂದಿಗೆ ವರನಿಂದ ವಧುವಿಗೆ ಮಂಗಳಸೂತ್ರ ಧಾರಣೆಯೊಂದಿಗೆ ವಿವಾಹ ಸಮಾರಂಭ ಅದ್ದೂರಿಯಿಂದ ನಡೆಯಿತು.

## ಬಣ್ಣದ ಲೋಕದ ಅಪಾಯಕಾರಿ ಕಾರ್ಮಿಕರು..!



**ಮಂಗಳೂರು:** ಕಾರಮಿಕರ ದಿನಾಚಾರಣೆಯನ್ನು ಆಚರಿಸುವ ಈ ಸಂದರ್ಭದಲ್ಲಿ ಯಾರಿಗೂ ನೆನಪಾಗದ ಕಲಾವಿದರು ಎಂದರೆ ಮನೋರಂಜನಾ ಜಗತ್ತಿನಲ್ಲಿರುವ ಕಲಾವಿದರು ಎಂದರೆ ತಪ್ಪಾಗಲಾರದು. ಹೊರಗಿನಿಂದ ನೋಡುವವರಿಗೆ ಎಷ್ಟು ಬಣ್ಣಬಣ್ಣವಾಗಿ ಮತ್ತು ಆಕರ್ಷಕವಾಗಿ ಕಂಡರೂ, ಅದರ ಬೆನ್ನಹಿಂದಿನ ವಾಸ್ತವ ಬದುಕು ಅಷ್ಟೇ ಕಠಿಣ ಮತ್ತು ಅಪಾಯಕಾರಿ ಸವಾಲುಗಳಿಂದ ಕೂಡಿರುತ್ತದೆ. ಕಾರ್ಮಿಕ ಎಂದರೆ ಕೇವಲ ಕಾರ್ಖಾನೆಗಳಲ್ಲಿ ಅಥವಾ ಕಟ್ಟಡ ನಿರ್ಮಾಣದಲ್ಲಿ ತೊಡಗಿರುವವರು ಮಾತ್ರವಲ್ಲ; ಸರ್ಕಸ್‌ನ ಎತ್ತರದ ಹಗ್ಗದ ಮೇಲೆ ನಡೆಯುವವರು, ಬೆಂಕಿಯೊಂದಿಗೆ ಸರಸವಾಡುವವರು, ಮರಣ ಬಾವಿಯ ಅಬ್ಬರದ ವೇಗದಲ್ಲಿ ಬೈಕ್ ಸವಾರಿ ಮಾಡುವವರು, ಹಗಲುವೇಷದಂತಹ ಜಾನಪದ ಕಲೆಗಳ ಮೂಲಕ ಜನರನ್ನು ರಂಜಿಸುವವರು ಅಥವಾ ಬೆಳ್ಳಿತೆರೆಯ ಮೇಲೆ ನಾಯಕನಗಾಗಿ ಪ್ರಾಣ ಪಣಕ್ಕಿಟ್ಟು ಸಾಹಸ ಮಾಡುವ **3ನೇ ಪುಟಕ್ಕೆ**

## ರಾಜ್ಯದಲ್ಲಿ ಜಲಕ್ಷಾಮ: ನೀರು ಪೂರೈಕೆಗೆ 'ಟಾಸ್ಕ್ ಫೋರ್ಸ್'



**ಬೆಂಗಳೂರು:** ರಾಜ್ಯದಾದ್ಯಂತ ಕಡು ಬೇಸಿಗೆಯ ಬಿಸಿಲಿನ ತಾಪ ದಿನದಿಂದ ದಿನಕ್ಕೆ ಏರುತ್ತಿದ್ದಂತೆ, ಬಹುತೇಕ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಭೀಕರ ಬಿಕ್ಕಟ್ಟು ಎದುರಾಗುತ್ತಿದೆ. ಹಳ್ಳಿಗಳಿಂದ ಹಿಡಿದು ನಗರ ಪ್ರದೇಶಗಳವರೆಗೆ ಜನರು ಹನಿ ನೀರಿಗಾಗಿ ಪರದಾಡುತ್ತಿರುವ ಸ್ಥಿತಿ ನಿರ್ಮಾಣವಾಗಿದೆ. ಈ ಗಂಭೀರ ಪರಿಸ್ಥಿತಿಯನ್ನು ಮನಗಂಡಿರುವ ರಾಜ್ಯ ಸರ್ಕಾರವು ಈಗ ಯುದ್ಧೋಪಾದಿಯಲ್ಲಿ ಕಾರ್ಯಾಚರಣೆಗೆ ಇಳಿದಿದ್ದು, ಪ್ರತಿ ತಾಲೂಕು ಮಟ್ಟದಲ್ಲಿ ವಿಶೇಷ 'ಟಾಸ್ಕ್ ಫೋರ್ಸ್' (ಕಾರ್ಯಪಡೆ) ರಚಿಸುವಂತೆ **3ನೇ ಪುಟಕ್ಕೆ**

## ವಿಕಸಿತ ಭಾರತ ಎಂಬುದು ಕೇವಲ ಗುರಿಯಲ್ಲ –ನಿರ್ಮಲಾ ಸೀತರಾಮನ್



**ಮಂಗಳೂರು:** ವಿಕಸಿತ ಭಾರತ ಎಂಬುದು ಕೇವಲ ಗುರಿಯಲ್ಲ, ಅದು ಮುಂದಿನ ಎರಡು ದಶಕಗಳಲ್ಲಿ ನಾವು ತಲುಪಬೇಕಾದ ಮಹತ್ವದ ಹಂತವಾಗಿದೆ. 2047ರ ವೇಳೆಗೆ ಭಾರತವನ್ನು ವಿಶ್ವದ ಬಲಿಷ್ಠ ಮತ್ತು ಸಮೃದ್ಧ ರಾಷ್ಟ್ರವನ್ನಾಗಿ ರೂಪಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ಮಂಗಳೂರಿನ ದೇರಳಕಟ್ಟೆಯ ಕೆ.ಎಸ್.ಹೆಗ್ಡೆ ಸಭಾಂಗಣದಲ್ಲಿ ನಡೆದ ನಿಟ್ಟೆ ಡಾ.ಎನ್.ವಿನಯ ಹೆಗ್ಡೆ ಉಪನ್ಯಾಸ ಕಾರ್ಯಕ್ರಮದಲ್ಲಿ 'ವಿಕಸಿತ **3ನೇ ಪುಟಕ್ಕೆ**






# ಸುದ್ದಿ ತುಣುಕು

ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಸ್ಥರಿಗೆ ನೀಡುವ ಮಾಸಿಕ ಪಿಂಚಣಿ ಸ್ಥಗಿತಗೊಳಿಸಿರುವುದನ್ನು ಪ್ರಶ್ನಿಸಿ 92 ವರ್ಷದ ಮೃತ ಸ್ವಾತಂತ್ರ್ಯ ಹೋರಾಟಗಾರನ ವಿಧವೆ ಪತ್ನಿ ಸಲ್ಲಿಸಿರುವ ಅರ್ಜಿಯ ಸಂಬಂಧ ಹೈಕೋರ್ಟ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ತುರ್ತು ನೋಟಿಸ್ ಜಾರಿ ಮಾಡಿದೆ.

ಕುವೆಂಪು ವಿಶ್ವವಿದ್ಯಾಲಯವು ವಿದ್ಯಾರ್ಥಿ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿ ಪ್ರತಿಭಟನೆ ನಡೆಸಿದ ಎನ್‌ಎಸ್‌ಯುಐ ಸಂಘಟನೆಯವರು, ವಿಸಿ ಕಚೇರಿಗೆ ನುಗ್ಗಿ ಆಕ್ರೋಶ ವ್ಯಕ್ತಪಡಿಸಿದರು.

ಸಿಇಟಿಯಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಆರೋಪ ಸಂಬಂಧ ಜಿಲ್ಲಾಧಿಕಾರಿಗಳು ತನಿಖೆ ನಡೆಸುತ್ತಿದ್ದು, ವರದಿಯಾಗಿ ಕಾಯಲಾಗುತ್ತಿದೆ ಎಂದು ಹೈಕೋರ್ಟ್‌ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮಾಹಿತಿ ನೀಡಿದೆ.

ಯಡಿಯೂರಪ್ಪನವರ ಅಭಿಮಾನೋತ್ಸವಕ್ಕೆ ರಾಜ್ಯದ ಮೂಲೆ ಮೂಲೆಗಳಿಂದ ಎಂಬತ್ತು ಲಕ್ಷ ಜನ ಬರುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು.

ಜಲಜೀವನ್ ಮಿಷನ್ 2.0 ಯೋಜನೆಗೆ ಸಂಬಂಧಿಸಿದ ತಿಳುವಳಿಕೆ ಪತ್ರಕ್ಕೆ ಸಹಿ ಹಾಕುವ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಭಾಗಿಯಾದರು.

ವಿಶೇಷ ವಿವಾಹ ಕಾಯಿದೆಯಡಿ ಮದುವೆಯಾಗಿದ್ದರೆ, ವಿಚ್ಛೇದನ ಪಡೆದುಕೊಳ್ಳಲು ಮದುವೆಯು ನೋಂದಣಿಯಾಗಿರಬೇಕು ಎಂಬ ನಿಯಮವಿಲ್ಲ ಎಂದು ರಾಜ್ಯ ಹೈಕೋರ್ಟ್ ತಿಳಿಸಿದೆ.

ಬಳ್ಳಾರಿಯ ಎರಡು ಆಸ್ಪತ್ರೆಗಳಲ್ಲಿ ಹಾಗೂ ಮೈಸೂರಿನಲ್ಲಿ 20 ಹಾಸಿಗೆಯ ಸನ್ ಸ್ಟ್ರೋಕ್ ವಾರ್ಡ್ ತೆರೆಯಲಾಗಿದೆ.

ತಾಪಮಾನ ಏರಿಕೆಯಿಂದಾಗಿ ರಕ್ತದಾನ ಮಾಡಲು ದಾನಿಗಳು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ, ಬ್ಲಡ್ ಬ್ಯಾಂಕ್‌ಗಳಲ್ಲಿ ರಕ್ತದ ಕೊರತೆ ಉಂಟಾಗಿದೆ.

ಮಾನ್ವಿ ತಾಲೂಕಿಗೆ ಮೂರನೇ ಬಾರಿಗೆ ಗಡಿಪಾರು ಮಾಡಿ ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿ ಮಹೇಶ್ ಶೆಟ್ಟಿ ತಿಮರೋಡಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾ ಮಾಡಿದೆ.

ಬೌರಿಂಗ್ ಆಸ್ಪತ್ರೆ ಬಳಿ ಕಾಂಪೌಂಡ್ ಕುಸಿದು 7 ಜನ ಮೃತಪಟ್ಟ ದುರಂತ ಸಂಬಂಧ ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಳ್ಳುವುದಾಗಿ ಲೋಕಾಯುಕ್ತ ನ್ಯಾಯಮೂರ್ತಿ ಹೇಳಿದ್ದಾರೆ.


ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದಲ್ಲಿ ಕಳೆದ ಎರಡು ತಿಂಗಳಿಂದ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮುಷ್ಕರ ನಡೆಸುತ್ತಿರುವ ಭೂಮಾಪಕರು.

ನಗರದ ಎಲ್ಲಾ ಸರ್ಕಾರಿ ಆಸ್ಪತ್ರೆಗಳ ಕಾಂಪೌಂಡ್ ಸೇರಿದಂತೆ ಕಟ್ಟಡಗಳ ಕ್ಷಮತೆ ಪರಿಶೀಲನೆಗೆ ಸೂಚಿಸುವುದಾಗಿ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಬೆಂಗಳೂರು ನಗರ ಪೊಲೀಸ್ ಇಲಾಖೆಯ ತುರ್ತು ಸಹಾಯವಾಣಿ 'ನಮ್ಮ 112'ಕ್ಕೆ ಬಹುಭಾಷಾ ಧ್ವನಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಳವಡಿಸಲಾಗಿದೆ.

ಬೆಂಗಳೂರು ಮಳೆಗೆ ಗೋಡೆ ಕುಸಿದು 6 ವರ್ಷದ ಬಾಲಕಿ ಸೇರಿದಂತೆ ಏಳು ಜನರು ಸಾವನ್ನಪ್ಪಿದ ಘಟನೆಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಈ ದುರ್ಘಟನೆ ದುರದೃಷ್ಟಕರ ಎಂದಿದ್ದು, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ.

# ರಾಗಿ ಮಣ್ಣಿ



**ಬೇಕಾಗುವ ಸಾಮಗ್ರಿಗಳು :**

ರಾಗಿ: 1 ಕಪ್
ಬೆಲ್ಲ: 1 ರಿಂದ 1.5 ಕಪ್
ತೆಂಗಿನ ಹಾಲು: 2 ಕಪ್
ಏಲಕ್ಕಿ ಪುಡಿ: 1 ಚಮಚ
ಗೇರುಬೀಜ ಮತ್ತು ದ್ರಾಕ್ಷಿ: ಸ್ವಲ್ಪ
ತುಪ್ಪ: 2-3 ದೊಡ್ಡ ಚಮಚ
ಉಪ್ಪು: ಒಂದು ಚಿಟಿಕೆ

**ತಯಾರಿಸುವ ವಿಧಾನ :**

ರಾಗಿಯನ್ನು 4-5 ಗಂಟೆಗಳ ಕಾಲ ನೆನೆಸಿಡಿ. ನಂತರ ಸ್ವಲ್ಪ ನೀರು ಸೇರಿಸಿ ಮಿಕ್ಸಿಯಲ್ಲಿ ನುಣ್ಣಗೆ ರುಬ್ಬಿಕೊಳ್ಳಿ. ಇದನ್ನು ಒಂದು ತೆಳುವಾದ ಬಟ್ಟೆ ಅಥವಾ ಸೋಸುವಿಕೆಯಲ್ಲಿ ಸೋಸಿ 'ರಾಗಿ ಹಾಲು' ತೆಗೆಯಿರಿ. ಇನ್ನೊಂದೆಡೆ ಬೆಲ್ಲಕ್ಕೆ ಸ್ವಲ್ಪ ನೀರು ಹಾಕಿ ಕರಗಿಸಿ, ಅದನ್ನು ಸೋಸಿಕೊಳ್ಳಿ. ಒಂದು ದಪ್ಪ ತಳದ ಪಾತ್ರೆಗೆ ರಾಗಿ ಹಾಲು, ತೆಂಗಿನ ಹಾಲು ಮತ್ತು ಬೆಲ್ಲದ ನೀರನ್ನು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಈ ಮಿಶ್ರಣವನ್ನು ಒಲೆಯ ಮೇಲಿಟ್ಟು ಸಣ್ಣ ಉರಿಯಲ್ಲಿ ಕೈ ಬಿಡದೆ ತಿರುಗಿಸುತ್ತಲೇ ಇರಿ. ಮಿಶ್ರಣವು ಗಟ್ಟಿಯಾಗುತ್ತಾ ಬಂದಂತೆ ಸ್ವಲ್ಪ ಸ್ವಲ್ಪವೇ ತುಪ್ಪ ಸೇರಿಸಿ. ಮಿಶ್ರಣವು ಪಾತ್ರೆಯ ತಳ ಬಿಟ್ಟು ಗಟ್ಟಿಯಾದ ಹಲ್ವದ ಹದಕ್ಕೆ ಬರಬೇಕು. ಈ ಹಂತದಲ್ಲಿ ಏಲಕ್ಕಿ ಪುಡಿ ಮತ್ತು ಹುರಿದ ಗೇರುಬೀಜ ಸೇರಿಸಿ. ಒಂದು ತಟ್ಟೆಗೆ ತುಪ್ಪ ಸವರಿ, ಈ ಮಿಶ್ರಣವನ್ನು ಅದಕ್ಕೆ ಹಾಕಿ ಸಮನಾಗಿ ಹರಡಿ.ಮಣ್ಣಿ ತಣ್ಣಗಾದ ನಂತರ ಬೇಕಾದ ಆಕಾರಕ್ಕೆ ಕತ್ತರಿಸಿದರೆ ಆರೋಗ್ಯಕರವಾದ ರಾಗಿ ಮಣ್ಣಿ ಸಿದ್ಧ.

# ನೈಜೀರಿಯಾದ ಫುಟ್ಬಾಲ್ ಮೈದಾನದಲ್ಲಿ ಗುಂಡಿನ ದಾಳಿ



ಜೋಸ್ : ಈಶಾನ್ಯ ನೈಜೀರಿಯಾದ ಅಡಮಾವಾ ರಾಜ್ಯದಲ್ಲಿ ಭಾನುವಾರ ಭೀಕರ ಗುಂಡಿನ ದಾಳಿ ನಡೆದಿದ್ದು, ಫುಟ್ಬಾಲ್ ಮೈದಾನದಲ್ಲಿ ಜಮಾಯಿಸಿದ್ದ 29 ಮಂದಿ ಸಾವನ್ನಪ್ಪಿದ್ದಾರೆ. ಕ್ಯಾಮರೂನ್ ಗಡಿಗೆ ಹೊಂದಿಕೊಂಡಿರುವ ಗೊಂಬಿ ಸ್ಥಳೀಯ ಸರ್ಕಾರಿ ವ್ಯಾಪ್ತಿಯ ಗಯಾಕು ಸಮುದಾಯದ ಮೇಲೆ ಈ ದಾಳಿ ನಡೆದಿದೆ ಎಂದು ರಾಜ್ಯ ಗವರ್ನರ್ ಅಹ್ಮದು ಉಮರು ಫಿಂಟಿರಿ ದೃಢಪಡಿಸಿದ್ದಾರೆ. ಹಲವರು ಆಟ ವೀಕ್ಷಿಸಲು ಮೈದಾನದಲ್ಲಿ ಜಮಾಯಿಸಿದ್ದ ಸಂದರ್ಭದಲ್ಲಿ ನುಗ್ಗಿದ ಶಸ್ತ್ರಸಜ್ಜಿತ ದಾಳಿಕೋರರು ಮನಬಂದಂತೆ ಗುಂಡಿನ ಮಳೆಗರೆದಿದ್ದಾರೆ.

# ಮಾತುಕತೆ ವಿಫಲಕ್ಕೆ ಅಮೆರಿಕವೇ ಕಾರಣ : ಇರಾನ್




ಟೆಹರಾನ್ : ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನ ಪರಿಸ್ಥಿತಿ ಮುಂದುವರಿದಿದ್ದು, ಇರಾನ್ ಮತ್ತು ಅಮೆರಿಕ ನಡುವಿನ ಬಿಕ್ಕಟ್ಟು ಮತ್ತಷ್ಟು ತಾರಕಕ್ಕೇರಿದೆ. ಇತ್ತೀಚಿನ ಬೆಳವಣಿಗೆಗಳ ಕುರಿತು ಮಾಹಿತಿ ಇರುವ ಪ್ರಾದೇಶಿಕ ಅಧಿಕಾರಿಗಳ ಪ್ರಕಾರ, ತನ್ನ ಬೇಡಿಕೆಗಳು ಈಡೇರಿದ ನಂತರವಷ್ಟೇ ಅಣ್ವಸ್ತ್ರ ಕಾರ್ಯಕ್ರಮದ ಕುರಿತು ಚರ್ಚಿಸಲು ಇರಾನ್ ಮುಂದಾಗಿದೆ. ಆದರೆ, ಇರಾನ್‌ನ ಈ ಪ್ರಸ್ತಾವನೆಯನ್ನು ಒಪ್ಪಿಕೊಳ್ಳಲು ಅಮೆರಿಕ ಹಿಂದೇಟು ಹಾಕುವ ಸಾಧ್ಯತೆ ದಟ್ಟವಾಗಿದೆ. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಅವರು ಇತ್ತೀಚೆಗೆ ರಷ್ಯಾಕ್ಕೆ ಭೇಟಿ ನೀಡಿ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೊಂದಿಗೆ ಮಾತುಕತೆ ನಡೆಸಿದರು.

# ಹಡಗಿನ ಮೇಲೆ ಗುಂಡಿನ ದಾಳಿ: ನಾವಿಕರು ಸುರಕ್ಷಿತ



ನವದೆಹಲಿ : ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಸಮುದ್ರ ಮಾರ್ಗದಲ್ಲಿ ಸಂಚರಿಸುವ ಭಾರತೀಯ ಸಿಬ್ಬಂದಿಗೆ ಪ್ರಾಣಾಪಾಯ ಎದುರಾಗಿದ್ದು, ಒಮಾನ್ ಕರಾವಳಿಯ ಬಳಿ ಭಾರತೀಯ ನಾವಿಕರಿದ್ದ 'ಎಂ.ಟಿ. ಸೈರಾನ್' ಎಂಬ ರಾಸಾಯನಿಕ ಟ್ಯಾಂಕರ್ ಹಡಗಿನ ಮೇಲೆ ಇರಾನ್ ಕೋಸ್ಟ್ ಗಾರ್ಡ್ ಪಡೆಗಳು ಗುಂಡಿನ ದಾಳಿ ನಡೆಸಿವೆ. ಈ ಆಘಾತಕಾರಿ ಘಟನೆಯನ್ನು ಭಾರತದ ಬಂದರು, ಹಡಗು ಮತ್ತು ಜಲಮಾರ್ಗ ಸಚಿವಾಲಯವು ಅಧಿಕೃತವಾಗಿ ಖಚಿತಪಡಿಸಿದೆ. ಈ ದಾಳಿಯಿಂದ ಹಡಗಿನಲ್ಲಿದ್ದ ಭಾರತೀಯ ಸಿಬ್ಬಂದಿಗಳು ತೀವ್ರ ಭೀತಿಗೊಳಗಾಗಿದ್ದರು.

# ಲಷ್ಕರ್ ಉಗ್ರ ಶೇಖ್ ಯೂಸುಫ್ ಅಫ್ರಿದಿ ಹತ್ಯೆ



ಪೇಶಾವರ : ಭಾರತದ ಪಾಲಿಗೆ ಮೋಸ್ಟ್ ವಾಂಟೆಡ್ ಉಗ್ರನಾಗಿರುವ ಹಫೀಜ್ ಸಯೀದ್‌ನ ಆಪ್ತ ಸಹಚರ ಹಾಗೂ ಲಷ್ಕರ್-ಎ-ತೈಬಾ (LeT) ಸಂಘಟನೆಯ ಹಿರಿಯ ಕಮಾಂಡರ್ ಶೇಖ್ ಯೂಸುಫ್ ಅಫ್ರಿದಿಯನ್ನು ಪಾಕಿಸ್ತಾನದ ಖೈಬರ್ ಪಖ್ತುನ್ಖ್ವಾ ಪ್ರಾಂತ್ಯದಲ್ಲಿ ಅಪರಿಚಿತ ಬಂದೂಕುಧಾರಿಗಳು ಗುಂಡಿಕ್ಕಿ ಕೊಂದಿದ್ದಾರೆ. ಖೈಬರ್ ಪಖ್ತುನ್ಖ್ವಾ ಪ್ರಾಂತ್ಯದ ಗಡಿ ಪ್ರದೇಶದಲ್ಲಿ ಶೇಖ್ ಯೂಸುಫ್ ಅಫ್ರಿದಿಯನ್ನು ಗುರಿಯಾಗಿಸಿಕೊಂಡು ಸಂಚು ರೂಪಿಸಿದ್ದ ದಾಳಿಕೋರರು, ಆತ ಬರುತ್ತಿದ್ದಂತೆ ಹೊಂಚು ಹಾಕಿ ಸತತವಾಗಿ ಗುಂಡಿನ ಮಳೆಗರೆದಿದ್ದಾರೆ.

# ಟ್ರಂಪ್ ಭಾಗಿಯಾಗಿದ್ದ ಔತಣಕೂಟದಲ್ಲಿ ಗುಂಡಿನ ದಾಳಿ



ನ್ಯೂಯಾರ್ಕ್ : ಶ್ವೇತಭವನದಲ್ಲಿ ಅಮೆರಿಕಾ ಅಧ್ಯಕ್ಷ ಟ್ರಂಪ್ ಭಾಗಿಯಾಗಿದ್ದ ಔತಣಕೂಟದಲ್ಲಿ ಗುಂಡಿನ ದಾಳಿ ನಡೆಸಿದ ಆರೋಪಿಯನ್ನು ಬಂಧಿಸಲಾಗಿದ್ದು, ಆತನನ್ನು ನೆಲಕ್ಕೆ ಬೀಳಿಸಿರುವ ಫೋಟೋವೊಂದನ್ನು ಅವರು ಬಿಡುಗಡೆ ಮಾಡಿದ್ದಾರೆ. ಶಂಕಿತ ಆರೋಪಿಯನ್ನು ಕ್ಯಾಲಿಫೋರ್ನಿಯಾದ ಟೊರೆನ್ಸ್‌ನ 31 ವರ್ಷದ ಕೋಲೆ ಥೋಮಸ್ ಅಲೆನ್ ಎಂದು ಗುರುತಿಸಲಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾಗವಹಿಸಿದ್ದ ವಾಷಿಂಗ್ಟನ್‌ನ ಶ್ವೇತಭವನದಲ್ಲಿಲ್ಲಿ ನಡೆದ ಮಾಧ್ಯಮ ಕಾರ್ಯಕ್ರಮದಲ್ಲಿ ಗುಂಡಿನ ದಾಳಿ ನಡೆದಿತ್ತು. ಕೋಲೆ ಥೋಮಸ್ ಅಲೆನ್ ವಿರುದ್ಧ ಈ ದಾಳಿ ನಡೆಸಿದ ಆರೋಪ ಹೊರಿಸಲಾಗಿದೆ.

# ಕ್ವಿಜೆರಾ ದಾಖಲೆಯ ಓಟ, ಸಂಜೀವನಿ ಜಾಧವ್ ಹ್ಯಾಟ್ರಿಕ್ ಸಾಧನೆ



ಬೆಂಗಳೂರು : 18ನೇ ಆವೃತ್ತಿಯ ಟಿಸಿಎಸ್ ವರ್ಲ್ಡ್ 10ಏ ಮ್ಯಾರಥಾನ್‌ನಲ್ಲಿ ದಾಖಲೆಗಳ ಸುರಿಮಳೆಯಾಗಿದ್ದು, ಬುರುಂಡಿಯ ರೊಡ್ರಿಗಸ್ ಕ್ವಿಜೆರಾ ಮತ್ತು ರವಾಂಡಾದ ಫ್ಲಾರೆನ್ಸ್ ನಿಯೋನ್ಕುರು ಅಂತಾರಾಷ್ಟ್ರೀಯ ವಿಭಾಗದಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿದ್ದಾರೆ. ಭಾರತೀಯರ ವಿಭಾಗದಲ್ಲಿ ಮಹಾರಾಷ್ಟ್ರದ ಸಂಜೀವನಿ ಜಾಧವ್ ಸತತ ಮೂರನೇ ಬಾರಿ ಚಿನ್ನ ಗೆಲ್ಲುವ ಮೂಲಕ ಹ್ಯಾಟ್ರಿಕ್ ಸಾಧನೆ ಮಾಡಿದರೆ, ಪುರುಷರ ವಿಭಾಗದಲ್ಲಿ ಹರ್ಮನ್ ಜೋತ್ ಸಿಂಗ್ 29:13 ಸೆಕೆಂಡುಗಳಲ್ಲಿ ಅಗ್ರಸ್ಥಾನ ಗಳಿಸಿದರು. ಕರ್ನಾಟಕದ ಶೈಲೇಶ್ ಕುಶ್ವಾಹ ದ್ವಿತೀಯ ಸ್ಥಾನ ಪಡೆದು ಗಮನ ಸೆಳೆದರು.

# ವಂಶಿಕಾ ಚೌಧರಿ ಮತ್ತು ಚಿರಾಗ್ ಶರ್ಮಗೆ ಚಿನ್ನದ ಪದಕ



ಈಜಿಪ್ಟ್ : ಕಿರಿಯರ ಶೂಟಿಂಗ್ ವಿಶ್ವಕಪ್‌ನ 10 ಮೀ. ಏರ್ ಪಿಸ್ತೂಲ್ ಮಿಶ್ರ ತಂಡ ವಿಭಾಗದಲ್ಲಿ ವಂಶಿಕಾ ಚೌಧರಿ ಮತ್ತು ಚಿರಾಗ್ ಶರ್ಮ ಚಿನ್ನದ ಪದಕ ಜಯಿಸಿದರು. ಇದರೊಂದಿಗೆ ಭಾರತದ ಚಿನ್ನದ ಪದಕಗಳ ಸಂಖ್ಯೆ 5ಕ್ಕೆ ಏರಿದೆ. ವಂಶಿಕಾ-ಚಿರಾಗ್ 484.3 ಅಂಕಗಳನ್ನು ಗಳಿಸಿ ಚಿನ್ನ ಗೆದ್ದರೆ, ಇದೇ ವಿಭಾಗದ ಮತ್ತೊಂದು ಭಾರತೀಯ ಜೋಡಿಯಾದ ಮೋಹಿನಿ ಸಿಂಗ್-ಹಿಮಾಂಶು ರಾಣಾ 407.4 ಅಂಕಗಳೊಂದಿಗೆ ಕಂಚಿನ ಪದಕಕ್ಕೆ ಗೆದ್ದರು. 5 ಚಿನ್ನ, 5 ಬೆಳ್ಳಿ ಮತ್ತು 4 ಕಂಚಿನ ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ಭಾರತವು ಅಗ್ರಸ್ಥಾನವನ್ನು ಕಾಯ್ದುಕೊಂಡಿದೆ.

# ಡಿ.ಕೆ.ಶಿವಕುಮಾರ್ ಆಫರ್ ತಿರಸ್ಕರಿಸಿದ್ದ ಪ್ರತಾಪ್ ಸಿಂಹ!



ಕುಮಟಾ: 2024ರ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಮೈಸೂರು ಕ್ಷೇತ್ರದಿಂದ ಸ್ಪರ್ಧಿಸಲು ತಮಗೆ ಕಾಂಗ್ರೆಸ್ ಪಕ್ಷದಿಂದ ಆಫರ್ ಬಂದಿತ್ತು ಎಂಬ ಸ್ಫೋಟಕ ಸತ್ಯವನ್ನು ಮಾಜಿ ಸಂಸದ ಪ್ರತಾಪ್ ಸಿಂಹ ಬಹಿರಂಗಪಡಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಕುಮಟಾದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಟಿಕೆಟ್ ಕೈತಪ್ಪಿದ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮಗೆ ದೂರವಾಣಿ ಕರೆ ಮಾಡಿ ಕಾಂಗ್ರೆಸ್‌ಗೆ ಆಹ್ವಾನಿಸಿದ್ದರು. ಕುಣಿಗಲ್ ಶಾಸಕ ರಂಗನಾಥ್ ಅವರ ಮೊಬೈಲ್ ಮೂಲಕ ಕರೆ ಮಾಡಿದ್ದ ಡಿ.ಕೆ. ಶಿವಕುಮಾರ್, "ಕಾಂಗ್ರೆಸ್‌ಗೆ ಬಂದು ಬಿಡು, ನಿನಗೆ ಟಿಕೆಟ್ ಕೊಡುತ್ತೇವೆ" ಎಂದು ಆಫರ್ ನೀಡಿದ್ದರು.

# ಜನಿವಾರ ತೆಗೆಸಿದ್ದು ಅಕ್ಷಮ್ಯ ಅಪರಾಧ: ಕ್ರಮಕ್ಕೆ ಡಿ.ಕೆ.ಶಿವಕುಮಾರ್ ಆಗ್ರಹ



ಬೆಂಗಳೂರು : ಬೆಂಗಳೂರಿನಲ್ಲಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಆಯೋಜಿಸಿದ್ದ ರಾಜ್ಯಮಟ್ಟದ ವಧು-ವರರ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಸಿಇಟಿ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಜನಿವಾರ ಎನ್ನುವುದು ಒಂದು ಶ್ರೇಷ್ಠ ಭಾವನೆಯಾಗಿದ್ದು, ಅದನ್ನು ಮುಟ್ಟಲು ಯಾರಿಗೂ ಬಿಡಬಾರದು ಎಂದು ಅವರು ಪ್ರತಿಪಾದಿಸಿದರು. ವಿದೇಶಗಳಿಗೆ ತೆರಳುವಾಗ ತಾಂತ್ರಿಕ ಕಾರಣಗಳಿಗಾಗಿ ಇಂತಹ ಕ್ರಮಗಳು ನಡೆಯುವುದು ಸಹಜ, ಆದರೆ ಪರೀಕ್ಷಾ ಕೇಂದ್ರಗಳಲ್ಲಿ ಇಂತಹ ಘಟನೆಗಳು ನಡೆಯುತ್ತಿರುವುದು ಸರಿಯಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

# ಮೇ 10ರಂದು 'ಅಪೆಕ್ಸ್ ರನ್ 2026' ಮ್ಯಾರಥಾನ್ ಆಯೋಜನೆ

ಮಂಗಳೂರು: ನಗರದ ಮಿಲಾಗ್ರಿಸ್ ಕಾಲೇಜು, ಐ.ಸಿ.ವೈ.ಎಂ. ಮಂಗಳೂರು ಧರ್ಮಪ್ರಾಂತ್ಯ ಹಾಗೂ ಮಂಗಳೂರು ರನ್ನರ್ಸ್ ಕ್ಲಬ್ ಇವರುಗಳ ಜಂಟಿ ಆಶ್ರಯದಲ್ಲಿ 'ಅಪೆಕ್ಸ್ ರನ್ 2026' ಮ್ಯಾರಥಾನ್ ಓಟವನ್ನು ಇದೇ ಬರುವ ಮೇ 10ರಂದು ಹಮ್ಮಿಕೊಳ್ಳಲಾಗಿದೆ ಎಂದು ಫಾ. ಆಲ್ವಿನ್ ಸೆರಾವೋ ತಿಳಿಸಿದರು. ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿ, ಅಂದು ಬೆಳಿಗ್ಗೆ ಮಿಲಾಗ್ರಿಸ್ ಕಾಲೇಜು ಆವರಣದಲ್ಲಿ ಈ ಓಟಕ್ಕೆ ಚಾಲನೆ ಸಿಗಲಿದ್ದು, ಸುಮಾರು 2500ಕ್ಕೂ ಹೆಚ್ಚು ಓಟಗಾರರು ಭಾಗವಹಿಸುವ ನಿರೀಕ್ಷೆಯಿದೆ. ದೈಹಿಕ ಕ್ಷಮತೆ, ಆರೋಗ್ಯ ಜಾಗೃತಿ ಮತ್ತು ಯುವಜನರಲ್ಲಿ ಸಮುದಾಯದ ಒಗ್ಗಟ್ಟನ್ನು ಉತ್ತೇಜಿಸುವ ಉದ್ದೇಶದಿಂದ ನಗರ ಮಟ್ಟದ ಮ್ಯಾರಥಾನ್ ಆಯೋಜಿಸಲಾಗಿದೆ.




# ಪಿಯುಸಿ ಅನುತ್ತೀರ್ಣರಾದವರಿಗೆ ವಿಶೇಷ ಬೋಧನಾ ತರಗತಿ ಆರಂಭ



ಮಂಗಳೂರು : ಪ್ರಥಮ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಥವಾ ತಮ್ಮ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳಿಗಾಗಿ ಶಾಲಾ ಶಿಕ್ಷಣ ಇಲಾಖೆಯು ಮಹತ್ವದ ನಿರ್ಧಾರ ಕೈಗೊಂಡಿದೆ. ಇಂತಹ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ವಿಶೇಷ ಹೆಚ್ಚುವರಿ ಬೋಧನಾ ತರಗತಿ ಹಾಗೂ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಇಲಾಖೆಯು ಅಧಿಕೃತ ಸುತ್ತೋಲೆ ಹೊರಡಿಸಿದೆ. ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಸರ್ಕಾರಿ ಪಿಯು ಕಾಲೇಜುಗಳಲ್ಲಿ ಈಗಾಗಲೇ ಈ ವಿಶೇಷ ತರಗತಿಗಳು ಆರಂಭಗೊಂಡಿದ್ದು, ಪರೀಕ್ಷೆಯಲ್ಲಿ ಹಿನ್ನಡೆ ಅನುಭವಿಸಿದ ವಿದ್ಯಾರ್ಥಿಗಳಿಗೆ ಇದು ಆಶಾಕಿರಣವಾಗಿದೆ.

# ಆಳಂದ ಗಲಭೆ ಪ್ರಕರಣದಲ್ಲಿ ಸ್ಪೀಕರ್ ಖಾದರ್ ಪತ್ರ: ಆಕ್ರೋಶ



ಕಲಬುರಗಿ : ಕಲಬುರಗಿ ಜಿಲ್ಲೆಯ ಆಳಂದದ ಲಾಡ್ಲೆ ಮಶಾಕ್ ದರ್ಗಾ ಗಲಭೆ ಪ್ರಕರಣವು ಈಗ ರಾಜ್ಯ ರಾಜಕಾರಣದಲ್ಲಿ ಹೊಸ ಸಂಚಲನ ಮೂಡಿಸಿದೆ. ಪ್ರಕರಣದಲ್ಲಿ ಬಂಧಿತರಾಗಿರುವ ಮುಸ್ಲಿಂ ಯುವಕರನ್ನು ಅಮಾಯಕರೆಂದು ಪರಿಗಣಿಸಿ ಅವರ ಮೇಲಿನ ಮೊಕದ್ದಮೆಗಳನ್ನು ಕೈಬಿಡುವಂತೆ ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಗೃಹ ಸಚಿವ ಜಿ. ಪರಮೇಶ್ವರ್ ಅವರಿಗೆ ಬರೆದಿರುವ ಪತ್ರವು ತೀವ್ರ ವಿವಾದಕ್ಕೆ ನಾಂದಿ ಹಾಡಿದೆ. ಸ್ಪೀಕರ್ ಅವರ ಈ ನಡೆಯು ತಟಸ್ಥವಾಗಿರಬೇಕಾದ ಸಾಂವಿಧಾನಿಕ ಹುದ್ದೆಯ ಘನತೆಗೆ ಕುಂದು ತಂದಿದೆ ಎಂದು ಆರೋಪಿಸಿರುವ ಹಿಂದೂ ಸಂಘಟನೆಗಳು ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆಯ ಎಚ್ಚರಿಕೆ ನೀಡಿವೆ.

# ರಾಜನಾಥ್ ಸಿಂಗ್ ಜೊತೆ ಡಿ. ಕೆ. ಶಿ ಚರ್ಚೆ



ಬೆಂಗಳೂರು : ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ ನವದೆಹಲಿಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಿ ಬೆಂಗಳೂರಿನ ರಕ್ಷಣಾ ವಿಮಾನ ನಿಲ್ದಾಣಗಳ ಸುತ್ತಲೂ ವಿಧಿಸಲಾಗುತ್ತಿರುವ ಎತ್ತರ ನಿರ್ಬಂಧಗಳ ಕುರಿತು ಚರ್ಚಿಸಿದ್ದಾರೆ. ನಗರದ ಹಲವಾರು ಭಾಗಗಳಲ್ಲಿನ ಅಭಿವೃದ್ಧಿಯ ಮೇಲೆ ಈ ನಿರ್ಬಂಧಗಳ ಪರಿಣಾಮದ ಬಗ್ಗೆ ಡಿಸಿಎಂ ಕಳವಳ ವ್ಯಕ್ತಪಡಿಸಿ, ಬೆಂಗಳೂರಿನ ಬೆಳವಣಿಗೆಯನ್ನು ಬೆಂಬಲಿಸುವಾಗ ವಾಯುಯಾನ ಸುರಕ್ಷತೆಯನ್ನು ಖಾತ್ರಿಪಡಿಸುವ ಸಮತೋಲಿತ ವಿಧಾನವನ್ನು ಪರಿಗಣಿಸುವಂತೆ ರಕ್ಷಣಾ ಸಚಿವರನ್ನು ಒತ್ತಾಯಿಸಿದ್ದಾರೆ.

# ಹರಿಯಾಣ ವಿಧಾನಸಭೆಯಲ್ಲಿ ಕಾಂಗ್ರೆಸ್ ಬಹಿಷ್ಕಾರ, ಪ್ರತಿಭಟನೆ

ಚಂಡೀಗಢ : ಮಹಿಳೆಯರಿಗೆ ಮೀಸಲಾತಿ ನೀಡುವ 'ನಾರಿ ಶಕ್ತಿ ವಂದನ್ ಅಧಿನಿಯಮ-2026' ಮಸೂದೆಯ ವಿಚಾರವಾಗಿ ಹರಿಯಾಣ ಸರ್ಕಾರ ಕರೆದಿದ್ದ ವಿಶೇಷ ಅಧಿವೇಶನದಲ್ಲಿ ಭಾರೀ ಹೈಡ್ರಾಮಾ ನಡೆದಿದೆ. ಆಡಳಿತಾರೂಢ ಬಿಜೆಪಿ ಸರ್ಕಾರವು ಮಹಿಳಾ ಮೀಸಲಾತಿ ವಿರೋಧಿಸುವ ಪಕ್ಷಗಳನ್ನು ಖಂಡಿಸಲು ಮುಂದಾದರೆ, ಕಾಂಗ್ರೆಸ್ ಶಾಸಕರು ಅಧಿವೇಶನವನ್ನೇ ಬಹಿಷ್ಕರಿಸಿ ಸದನದ ಹೊರಗೆ 'ಸಮಾನಾಂತರ ಅಧಿವೇಶನ' ನಡೆಸುವ ಮೂಲಕ ತೀವ್ರ ಪ್ರತಿರೋಧ ವ್ಯಕ್ತಪಡಿಸಿದರು. ಸದನದ ಕಲಾಪ ಆರಂಭವಾಗುವ ಮುನ್ನವೇ ಸಭೆ ನಡೆಸಿದ ಕಾಂಗ್ರೆಸ್ ಶಾಸಕರು, ಅಧಿವೇಶನದಲ್ಲಿ ಭಾಗವಹಿಸದಿರಲು ನಿರ್ಧರಿಸಿದರು.



# ಶೋಪಿಯಾನ್‌ನ ಜಾಮಿಯಾ ಸಿರಾಜುಲ್ ಉಲೂಮ್ ಸಂಸ್ಥೆ ನಿಷೇಧ



ಜಮ್ಮು ಮತ್ತು ಕಾಶ್ಮೀರ : ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದಲ್ಲಿ ಉಗ್ರ ಸಂಘಟನೆಗಳೊಂದಿಗೆ ನಂಟು ಹೊಂದಿರುವ ಮತ್ತು ಅಕ್ರಮ ಹಣ ವರ್ಗಾವಣೆ ಪ್ರಕರಣಗಳಲ್ಲಿ ಭಾಗಿಯಾಗಿರುವ ಗಂಭೀರ ಆರೋಪದ ಮೇಲೆ ಮತ್ತೊಂದು ಇಸ್ಲಾಮಿಕ್ ಶಿಕ್ಷಣ ಸಂಸ್ಥೆಯನ್ನು ಕಾನೂನು ಬಾಹಿರ ಚಟುವಟಿಕೆಗಳ ತಡೆ ಕಾಯ್ದೆ (ಯುಎಪಿಎ) ಅಡಿಯಲ್ಲಿ ನಿಷೇಧಿಸಲಾಗಿದೆ. ಶೋಪಿಯಾನ್‌ನ ಇಮಾಮ್ ಸಾಹಿಬ್ ಪ್ರದೇಶದಲ್ಲಿರುವ 'ಜಾಮಿಯಾ ಸಿರಾಜುಲ್ ಉಲೂಮ್' ಎಂಬ ಸಂಸ್ಥೆಯ ಮೇಲೆ ಸರ್ಕಾರ ಈ ಕಠಿಣ ಕ್ರಮ ಕೈಗೊಂಡಿದೆ. ವಿಭಾಗೀಯ ಆಯುಕ್ತರು ಯುಎಪಿಎ ಸೆಕ್ಷನ್ 8(1) ರ ಅಡಿಯಲ್ಲಿ ಈ ಸಂಸ್ಥೆಯನ್ನು ಕಾನೂನುಬಾಹಿರ ಸಂಸ್ಥೆ ಎಂದು ಘೋಷಿಸಿ ಆದೇಶ ಹೊರಡಿಸಿದ್ದಾರೆ.

# ಪಶ್ಚಿಮ ಬಂಗಾಳ ಚುನಾವಣೆ ಹೊತ್ತಲ್ಲೇ ಕಚ್ಚಾ ಬಾಂಬ್ ಪತ್ತೆ




ಪಶ್ಚಿಮ ಬಂಗಾಳ : ವಿಧಾನಸಭಾ ಚುನಾವಣೆಯ ಎರಡನೇ ಹಂತದ ಮತದಾನಕ್ಕೆ ಕ್ಷಣಗಣನೆ ಆರಂಭವಾಗಿರುವ ಬೆನ್ನಲ್ಲೇ ಭಾರಿ ಪ್ರಮಾಣದ ಸ್ಫೋಟಕಗಳು ಪತ್ತೆಯಾಗಿದ್ದು, ರಾಜ್ಯದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಕೋಲ್ಕತ್ತಾದ ಭಂಗಾರ್ ವಿಭಾಗದ ಉತ್ತರ ಕಾಶಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರೋಬ್ಬರಿ 79 ಕಚ್ಚಾ ಬಾಂಬ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಈ ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ಕೇಂದ್ರ ಗೃಹ ಸಚಿವಾಲಯವು ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆಗೆ (ಎನ್‌ಐಎ) ವಹಿಸಿದೆ. ಗೃಹ ಸಚಿವಾಲಯದ ನಿರ್ದೇಶನದಂತೆ ಎನ್‌ಐಎ ತಡರಾತ್ರಿ ಅಧಿಕೃತವಾಗಿ ಎಫ್.ಐ.ಆರ್ ದಾಖಲಿಸಿಕೊಂಡು ಕಾರ್ಯಾಚರಣೆ ಆರಂಭಿಸಿದೆ.

# ಗುಜರಾತ್‌ನ ಮತದಾನದ ನಡುವೆ 736 ಬಿಜೆಪಿ ಅಭ್ಯರ್ಥಿಗಳ ಅವಿರೋಧ ಆಯ್ಕೆ




ಗಾಂಧಿನಗರ : ಗುಜರಾತ್ ರಾಜ್ಯದ ಸ್ಥಳೀಯ ಸಂಸ್ಥೆಗಳ ಚುನಾವಣಾ ಕಣವು ಭಾರೀ ಕುತೂಹಲಕ್ಕೆ ಸಾಕ್ಷಿಯಾಗಿದ್ದು, ಮತದಾರರ ಪಟ್ಟಿಗಳ ವಿಶೇಷ ಪರಿಷ್ಕರಣೆಯ ನಂತರ ರಾಜ್ಯದ 15 ನಗರಪಾಲಿಕೆಗಳು, 84 ನಗರಸಭೆಗಳು, 34 ಜಿಲ್ಲಾ ಪಂಚಾಯಿತಿ ಹಾಗೂ 260 ತಾಲೂಕು ಪಂಚಾಯಿತಿಗಳಿಗೆ ಭಾನುವಾರ ಶಾಂತಿಯುತ ಮತದಾನ ನಡೆಯಿತು. 1995ರಿಂದಲೂ ರಾಜ್ಯದಲ್ಲಿ ಸತತವಾಗಿ ಆಡಳಿತ ನಡೆಸುತ್ತಿರುವ ಬಿಜೆಪಿ ಈ ಬಾರಿಯೂ ತನ್ನ ಪ್ರಾಬಲ್ಯ ಮೆರೆದಿದ್ದು, ಅಧಿಕೃತ ಫಲಿತಾಂಶಕ್ಕೂ ಮುನ್ನವೇ ದಾಖಲೆಯ 736 ಬಿಜೆಪಿ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

# ಕಲ್ಪಕ್ಕಂ ವಿಜ್ಞಾನಿಗಳನ್ನು ಶ್ಲಾಘಿಸಿದ ಪ್ರಧಾನಿ ಮೋದಿ

ನವದೆಹಲಿ : ತಮಿಳುನಾಡಿನ ಕಲ್ಪಕ್ಕಂನಲ್ಲಿರುವ 500ಮೆಗಾವ್ಯಾಟ್ ಸಾಮರ್ಥ್ಯದ ಸ್ವದೇಶಿ ನಿರ್ಮಿತ ಪ್ರೊಟೋಟೈಪ್ ಫಾಸ್ಟ್ ಬ್ರೀಡರ್ ರಿಯಾಕ್ಟರ್ ಯಶಸ್ವಿಯಾಗಿ 'ಕ್ರಿಟಿಕಾ ಲಿಟಿ' ಹಂತವನ್ನು ತಲುಪಿರುವುದು ಭಾರತದ ಇಂಧನ ಕ್ಷೇತ್ರದಲ್ಲಿ ಒಂದು ಐತಿಹಾಸಿಕ ಮೈಲಿಗಲ್ಲು ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ತಮ್ಮ ಮಾಸಿಕ ರೇಡಿಯೋ ಕಾರ್ಯಕ್ರಮ 'ಮನ್ ಕಿ ಬಾತ್'ನ 133ನೇ ಸಂಚಿಕೆಯಲ್ಲಿ ಈ ವಿಷಯವನ್ನು ಹಂಚಿಕೊಂಡ ಅವರು ಸಂಪೂರ್ಣವಾಗಿ ಭಾರತೀಯ ತಂತ್ರಜ್ಞಾನದಿಂದಲೇ ಈ ಸಾಧನೆ ಮಾಡಿರುವುದು 'ವಿಕಸಿತ ಭಾರತ'ದ ಸಂಕಲ್ಪಕ್ಕೆ ದೊಡ್ಡ ಬಲ ನೀಡಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ

## "ವಾದಿರಾಜ ವಾಲಗ ಮಂಡಳಿ" ಚಿತ್ರೀಕರಣ ಪೂರ್ಣ

ಶೀಘ್ರದಲ್ಲೇ ತೆರೆಗೆ ಬರಲು ಸಜ್ಜಾದ ಹಾಸ್ಯಮಯ ಸಿನಿಮಾ ಮಂಗಳೂರು ಕನ್ನಡ ಚಿತ್ರರಂಗದಲ್ಲಿ ಸದಾ ಹೊಸ ಪ್ರಯೋಗಗಳಿಗೆ ಮನ್ನಣೆ ಸಿಗುತ್ತಲೇ ಇರುತ್ತದೆ. ಇದೀಗ ಅದೇ ಸಾಲಿಗೆ ಸೇರ್ಪಡೆಗೊಳ್ಳಲು ಸಜ್ಜಾಗಿದೆ ವಿಭಿನ್ನ ಶೀರ್ಷಿಕೆಯ "ವಾದಿರಾಜ ವಾಲಗ ಮಂಡಳಿ" ಚಿತ್ರ. ಖ್ಯಾತ ಚಿತ್ರ ನಿರ್ಮಾಪಕ ಡಾ. ಎಂ.ಎನ್. ರಾಜೇಂದ್ರ ಕುಮಾರ್ ಅವರ ಸಾರಥ್ಯದಲ್ಲಿ ಮೂಡಿಬರುತ್ತಿರುವ ಈ ಸಿನಿಮಾದ ಚಿತ್ರೀಕರಣವು ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಸದ್ಯ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ಚಿತ್ರತಂಡ ಬ್ಯುಸಿಯಾಗಿದೆ. ಇದರ ಮಧ್ಯೆ ಚಿತ್ರ ತಂಡ ಪ್ರತ್ರಿಕಾಗೋಷ್ಠಿಯಲ್ಲಿ ತನ್ನ ಅನುಭವ ಹಂಚಿಕೊಂಡಿತು. "ವರಾಹ ರೂಪಂ" ಹಾಡಿನ ಮೂಲಕ ಜನಪ್ರಿಯತೆ ಗಳಿಸಿರುವ ಶಶಿರಾಜ್ ಕಾವೂರು ಅವರು ಈ ಚಿತ್ರದ ಮೂಲಕ ನಿರ್ದೇಶಕರಾಗಿ ಪಾದಾರ್ಪಣೆ ಮಾಡುತ್ತಿರುವುದು ವಿಶೇಷ. ಕಥೆ, ಚಿತ್ರಕಥೆ ಹಾಗೂ ಸಂಭಾಷಣೆಯ ಜವಾಬ್ದಾರಿಯನ್ನು ಹೊತ್ತಿರುವ ಇವರು, ಸುಮಾರು 50 ದಿನಗಳ ಕಾಲ ಎರಡು ಹಂತಗಳಲ್ಲಿ ಚಿತ್ರೀಕರಣವನ್ನು ಮುಗಿಸಿದ್ದಾರೆ. ಕರಾವಳಿ ಕನ್ನಡದ ಸೊಗಡನ್ನು ಹೊಂದಿದ್ದರೂ, ರಾಜ್ಯದ ಎಲ್ಲಾ ಭಾಗದ ಪ್ರೇಕ್ಷಕರಿಗೂ ತಲುಪುವಂತಹ ಸಾರ್ವತ್ರಿಕ ಹಾಸ್ಯ ಹಾಗೂ ಭಾವನಾತ್ಮಕ ಕಥಾಹಂದರವನ್ನು ಈ ಸಿನಿಮಾ ಹೊಂದಿದೆ ಎಂದು ಚಿತ್ರದ ನಿರ್ಮಾಪಕರಾದ ಎಮ್ ಎನ್ ರಾಜೇಂದ್ರಕುಮಾರ್ ತಿಳಿಸಿದರು. ಚಿತ್ರದಲ್ಲಿ ನವೀನ್ ಪಡೀಲ್, ಪ್ರಕಾಶ್ ತುಮಿನಾಡು, ಮೈಮ್ ರಾಮದಾಸ್, ದೀಪಕ್ ರೈ ಪಾಣಾಜೆ ಹಾಗೂ ಪುಷ್ಪರಾಜ್ ಬೊಳ್ಳೂರು ಅವರಂತಹ ದಿಗ್ಗಜ ಕಲಾವಿದರ ದಂಡೇ ಇದೆ.



## 'ಕಾಮನ್ ಮ್ಯಾನ್' ಆದ ಗೌರೀಶಂಕರ್

ಸಾಮಾನ್ಯ ವ್ಯಕ್ತಿಯೊಬ್ಬ ರಾಜ್ಯದ ಮುಖ್ಯಮಂತ್ರಿಯಾದರೆ ಹೇಗಿರುತ್ತೆ ಎಂಬ ಎಳೆ ಇಟ್ಟುಕೊಂಡು ಕಥೆ ಬರೆದು ಸುರಭಿ ಫಿಲಂಸ್ ಅಡಿ ಎನ್. ನರಸಿಂಹಮೂರ್ತಿ ಅವರು "ಕಾಮನ್ ಮ್ಯಾನ್" ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಹಿರಿಯ ನಿರ್ದೇಶಕ ಓಂ ಸಾಯಿಪ್ರಕಾಶ್ ಅವರು ಈ ಚಿತ್ರದ ಚಿತ್ರಕಥೆ ರಚಿಸಿ ಆಕ್ಷನ್‌ಕಟ್ ಹೇಳಿದ್ದಾರೆ. ಕಿರುತೆರೆ ಖ್ಯಾತಿಯ ನಟ ಗೌರಿಶಂಕರ್ ಈ ಚಿತ್ರದ ನಾಯಕನಾಗಿ ನಟಿಸಿದ್ದಾರೆ. ಚಿತ್ರದ ಟೈಟಲ್ ಹಾಗೂ ಫಸ್ಟ್‌ಲುಕ್ ಲಾಂಚ್ ಕಾರ್ಯಕ್ರಮ ನಡೆಯಿತು. ವಿನಯ ಚಂದ್ರ ಅವರ ಸಂಗೀತ ನಿರ್ದೇಶನ, ಜಿ.ಜಿ. ಕೃಷ್ಣ, ದೀಪಕ್ ಕುಮಾರ್ ಅವರ ಛಾಯಾಗ್ರಹಣ ಈ ಚಿತ್ರಕ್ಕಿದೆ. ಈ ಸಂದರ್ಭದಲ್ಲಿ ಮಾತನಾಡಿದ ಸಾಯಿಪ್ರಕಾಶ್ ನನ್ನ ನಿರ್ದೇಶನದ 106ನೇ ಚಿತ್ರವಿದು. ಒಬ್ಬ ಕಾಮನ್ ಮ್ಯಾನ್ ರಾಜ್ಯದ ಸಿಎಂ ಆದರೆ ಏನು ಮಾಡಬಹುದು ಎಂದು ನಮ್ಮ ಚಿತ್ರದ ಮೂಲಕ ತೋರಿಸಿದ್ದೇವೆ. ಜೀವನದಲ್ಲಿ ಪ್ರತಿಯೊಬ್ಬರಿಗೂ ಒಂದೊಂದು ಆಸೆ ಇರುತ್ತೆ. ನಾಯಕ ಒಬ್ಬ ಲಾಯರ್, ಆತ ಅನಿರೀಕ್ಷಿತವಾಗಿ ರಾಜ್ಯದ ಸಿಎಂ ಆಗ್ತಾನೆ. ನಂತರ ಆತ ಏನೇನು ಮಾಡಬಹುದು, ಸಮಾಜದಲ್ಲಿ ಏನಾದರೂ ಸುಧಾರಣೆ ಮಾಡಲು ಸಾಧ್ಯವಾಯಿತಾ ಎಂಬುದನ್ನು ಕುತೂಹಲಕರವಾಗಿ ಹೇಳೋ ಪ್ರಯತ್ನ ಮಾಡಿದ್ದೇನೆ. ನಾಯಕನ ತಂದೆ ಒಬ್ಬ ಕಲಾವಿದ. ತನ್ನ ಮಗ ಲಾಯರ್ ಆಗಿ ಸಮಾಜಕ್ಕೆ ಏನಾದರೂ ಒಳ್ಳೆಯದು ಮಾಡಬೇಕು ಎನ್ನುವುದು ಆತನ ಆಸೆಯಾಗಿರುತ್ತೆ. ಜೀವನದಲ್ಲಿ ಪ್ರತಿಯೊಬ್ಬರಿಗೂ ಒಂದು ಅವಕಾಶ ಬರುತ್ತೆ. ಅದೇ ರೀತಿ ನಾಯಕನಿಗೂ ಅದು ಬಂದಾಗ ಅದನ್ನು ಆತ ಹೇಗೆ ಯುಟಿಲೈಸ್ ಮಾಡಿಕೊಳ್ತಾನೆ, 'ಆತ ಹೇಗೆ ಸಿಎಂ ಆದ ಎಂದು ಯಾರೂ ಪ್ರಶ್ನಿಸಲಾಗದ ಸಂದರ್ಭ ಕೂಡ ಬಂದಿರುತ್ತದೆ. ಕಥೆ ಕೇಳಿದ ಕೂಡಲೇ ಇದು 100% ಓಪನಿಂಗ್ ತೆಗೆದುಕೊಳ್ಳುತ್ತದೆ ಎನಿಸಿತು. ನಾಯಕಿ ಸೋನಾ ಲದ್ವಾ ಚೆನ್ನಾಗಿ ಆಕ್ಟ್ ಮಾಡಿದ್ದಾರೆ. ಪಾತ್ರಕ್ಕೆ ಏನು ಬೇಕೋ ಅದಕ್ಕೆ ತಕ್ಕಂತೆ ಅಭಿನಯಿಸಿದ್ದಾರೆ ಎಂದರು.



## 'ಅಣ್ಣ From Mexico'ಚಿತ್ರದ ಟೀಸರ್ ಬಿಡುಗಡೆ

ನಟ ರಾಕ್ಷಸ ಡಾಲಿ ಧನಂಜಯ್ ನಟಿಸುತ್ತಿರುವ 'ಅಣ್ಣ from Mexico' ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಮಾರಂಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿ ವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಟೀಸರ್ ಬಿಡುಗಡೆಗೊಳಿಸಿ ಇಡೀ ತಂಡಕ್ಕೆ ಶುಭ ಹಾರೈಸಿದರು. ಬಳಿಕ ಮಾತ ನಾಡಿದ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡಿ, ಟೀಸರ್ ಥ್ರಿಲ್ಲಿಂಗ್ ಆಗಿದೆ. ಹೊಸತನ ದಿಂದ ಕೂಡಿದೆ. ಶ್ರೀಮಂತಿಕೆಯಿಂದ ಕಾಣಿಸುತ್ತಿದೆ. ಧನಂಜಯ್ ಆಕ್ಟಿಂಗ್ ಸೂಪರ್. ಅದ್ರಲ್ಲೂ ಕರ್ನಾಟಕ ಲಾಕೆಟ್ ಬಹಳಷ್ಟು ಇಷ್ಟವಾಯ್ತು. ಮನಸ್ಸಿಗೆ ಸಮಾಧಾನವಾಯ್ತು. ಟೀಸರ್ ನೋಡಿದರೆ ಸಿನಿಮಾ ಹೇಗಿರಲಿದೆ ಎಂಬ ಕ್ಯೂರಿಯಾಸಿಟಿ ಹೆಚ್ಚಿಸು ತ್ತದೆ. ನಾವು ಚಿತ್ರರಂಗಕ್ಕೆ ಏನಾದರೂ ಕೊಡುಗೆ ನೀಡಬೇಕು ಎಂಬ ಉದ್ದೇಶದಿಂದ ಚಿತ್ರ ನಿರ್ಮಾಣಕ್ಕಿಳಿದಿದ್ದೇವೆ. ಕನ್ನಡ ಚಲನ ಚಿತ್ರಗಳನ್ನು ನೋಡಿಕೊಂಡು ಬೆಳೆದಿದ್ದೇವೆ. ಕನ್ನಡ ಚಿತ್ರರಂಗ ಸಾಕಷ್ಟು ಶ್ರೀಮಂತವಾಗಿದೆ. ಈ ಚಿತ್ರದ ಕಥೆ ಕೇಳಿದೆವು ಇಷ್ಟವಾಯ್ತು. ಚಿತ್ರದಲ್ಲಿ ಒಂದೊಳ್ಳೆ ಪ್ರಯೋಗ ಮಾಡುವ ಉದ್ದೇಶದಿಂದ ಚಾಮುಂಡಿ ಆಶೀರ್ವಾದ ಪಡೆದು ಈ ಜರ್ನಿ ಶುರು ಮಾಡಿದೆವು ಎಂದರು. ಡಾಲಿ ಧನಂಜಯ್ ಮಾತನಾಡಿ, ಈ ಸಿನಿಮಾ ಶುರುವಾದ ಪ್ರೊಸೆಸ್ ನನಗೆ ಬಹಳ ಖುಷಿ. ಹೊಯ್ಸಳ ಸಿನಿಮಾ ಬೆಳಗಾವಿಯಲ್ಲಿ ನಡೆಯುವಾಗ ಲಕ್ಷ್ಮೀ ಮೇಡಂ ಮನೆಗೆ ಹೋಗಿ ಊಟ ಮಾಡ್ಕೊಂಡು ಬರುವಾಗ ನಮ್ಮ ಬ್ರದರ್‌ಗೆ ಸಿನಿಮಾ ಮಾಡುವ ಇಂಟ್ರೆಸ್ಟ್ ಇದೆ. ಏನು ಮಾಡಬಹುದು ನೋಡಿ ಎಂದಿದ್ದರು ಎಂದರು.



## ಗೋಲ್ಡನ್ ಸ್ಟಾರ್ ಗಣೇಶ್ ಸಿನಿ ಪಯಣಕ್ಕೆ 'ಪಿನಾಕ' ಸೆಟ್‌ನಲ್ಲಿ ಗೌರವ

ಸ್ಯಾಂಡಲ್‌ವುಡ್‌ನ ಅಪ್ರತಿಮ ನಟ 'ಗೋಲ್ಡನ್ ಸ್ಟಾರ್' ಗಣೇಶ್ ಅವರು ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿ ಯಶಸ್ವಿ 20 ವರ್ಷಗಳನ್ನು ಪೂರೈಸಿದ ಸಂಭ್ರಮದಲ್ಲಿದ್ದಾರೆ. ಕಳೆದ ಎರಡು ದಶಕಗಳಿಂದ ಪ್ರೇಕ್ಷಕರಿಂದಲೂ ಅತಿ ಹೆಚ್ಚು ಪ್ರೀತಿಯನ್ನೂ ಗಳಿಸಿದ್ದಾರೆ ಈ ನಟ. ಈ ವಿಶೇಷ ಮೈಲಿಗಲ್ಲನ್ನು ಅವರ ಬಹುನಿರೀಕ್ಷಿತ ಚಿತ್ರ 'ಪಿನಾಕ' ಚಿತ್ರೀಕರಣದ ಸೆಟ್‌ನಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು. ಖ್ಯಾತ ನಿರ್ಮಾಣ ಸಂಸ್ಥೆ ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ 'ಪಿನಾಕ' ಚಿತ್ರದ ಶೂಟಿಂಗ್ ಬಿರುಸಿನಿಂದ ಸಾಗುತ್ತಿದೆ. ಇದೇ ವೇಳೆ ಚಿತ್ರದ ನಿರ್ಮಾಪಕರಾದ ಟಿಜಿ ವಿಶ್ವಪ್ರಸಾದ್ ಮತ್ತು ಕೃತಿ ಪ್ರಸಾದ್, ಗಣೇಶ್ ಅವರ ದೀರ್ಘಕಾಲದ ಸಾಧನೆಯನ್ನು ಸ್ಮರಿಸಿ, ಅವರಿಗೆ ಸನ್ಮಾನ ಮಾಡುವ ಮೂಲಕ ಗೌರವ ಸಲ್ಲಿಸಿದರು. ಚಿತ್ರೀಕರಣದ ಸ್ಥಳದಲ್ಲೇ ಕೇಕ್ ಕತ್ತರಿಸಿ, ಇಡೀ ಚಿತ್ರತಂಡದ ಸಮ್ಮುಖದಲ್ಲಿ ಗಣೇಶ್ ಅವರಿಗೆ ಅಭಿನಂದನೆಗಳನ್ನು ತಿಳಿಸಲಾಯಿತು. ಭರ್ಜರಿಯಾಗಿ ಮೂಡಿಬರುತ್ತಿದೆ 'ಪಿನಾಕ' ಪೀಪಲ್ ಮೀಡಿಯಾ ಫ್ಯಾಕ್ಟರಿಯ ಈ ಮಹತ್ವಾಕಾಂಕ್ಷೆಯ ಚಿತ್ರವು ಭಾರಿ ವೆಚ್ಚದಲ್ಲಿ ಮತ್ತು ಅದ್ಧೂರಿ ತಾರಾಗಣದೊಂದಿಗೆ ನಿರ್ಮಾಣವಾಗುತ್ತಿದೆ. ಈಗಾಗಲೇ ಚಿತ್ರದ ಶೇ. 80 ಭಾಗದ ಶೂಟಿಂಗ್ ಮುಕ್ತಾಯವಾಗಿದ್ದು, ಸಿನಿಮಾ ಅತ್ಯಂತ ಅದ್ಭುತವಾಗಿ ಮೂಡಿಬರುತ್ತಿದೆ. ವಿವಿಧ ಭಾಷೆಗಳ ಖ್ಯಾತ ಕಲಾವಿದರು ಈ ಚಿತ್ರದಲ್ಲಿ ಒಂದಾಗುತ್ತಿದ್ದು, ಇದು ಗಣೇಶ್ ಅವರ ಕೆರಿಯರ್‌ನಲ್ಲೇ ಅತಿ ದೊಡ್ಡ ಸಿನಿ ಮಾ ವಾಗಲಿದೆ.



## ಕೆಡಿ ಚಿತ್ರದಲ್ಲಿ ಕಾಲ ಭೈರವನಾದ ಕಿಚ್ಚ ಸುದೀಪ್

ಕೆವಿಎನ್ ಪ್ರೊಡಕ್ಷನ್ಸ್ ನಿರ್ಮಾಣದ, ಜೋಗಿ ಪ್ರೇಮ್ ಅವರ ನಿರ್ದೇಶನದ ಕೆಡಿ ಚಿತ್ರ ಸಾಕಷ್ಟು ವಿವಾದಗಳನ್ನು ದಾಟಿ ಕಡೆಗೂ ಸೆನ್ಸಾರ್ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಏಪ್ರಿಲ್ 30ರಂದು ಅದ್ದೂರಿಯಾಗಿ ತೆರೆಗೆ ಬರಲು ಸಿದ್ಧವಾಗಿದೆ, ದ್ರುವ ಸರ್ಜಾ, ರೀಶ್ಮಾ ನಾಣಯ್ಯ ನಾಯಕ, ನಾಯಕಿಯಾಗಿ ಕಾಣಿಸಿಕೊಂಡಿರುವ ಈ ಚಿತ್ರದಲ್ಲಿ ಕಿಚ್ಚ ಸುದೀಪ್ ಅವರು ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಈ ಬಗ್ಗೆ ಮಾಹಿತಿ ನೀಡಲು ಹಾಗೂ ಚಿತ್ರದ ಮತ್ತೊಂದು ಹಾಡಿನ ಬಿಡುಗಡೆಯ ಜತೆ ಸುದೀಪ್ ಅವರ ಜತೆ ವಿಶೇಷ ಸಂವಾದ ಕಾರ್ಯಕ್ರಮ ಸೋಮವಾರ ಸಂಜೆ ನೆರವೇರಿತು.



## ಕೆವಿಎನ್-ಪವನ್ ಒಡೆಯರ್-ಶಿವಣ್ಣ ಕಾಂಬಿನೇಷನ್ ಸಿನಿಮಾದ ಟೈಟಲ್ ರಿವೀಲ್

ದಕ್ಷಿಣ ಭಾರತದ ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಕೆವಿಎನ್ ಮೊದಲ ಬಾರಿಗೆ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅವರ ಜೊತೆ ಕೈ ಜೋಡಿಸಿರುವುದು ಗೊತ್ತೇ ಇದೆ. ನಿರ್ದೇಶಕ ಪವನ್ ಒಡೆಯರ್ ಸಾರಥ್ಯದಲ್ಲಿ ಮೂಡಿಬರ್ತಿರುವ ಈ ಬಹು ನಿರೀಕ್ಷಿತ ಸಿನಿಮಾದ ಫಸ್ಟ್ ಲುಕ್ ಹಾಗೂ ಟೈಟಲ್‌ನ್ನು ಇಂದು ಅಣ್ಣಾವ್ರ ಜನ್ಮೋತ್ಸವದ ಅಂಗವಾಗಿ ಅನಾವರಣ ಮಾಡಲಾಗಿದೆ. ವೆಂಕಟ್ ಕೆ ನಾರಾಯಣ್, ಶಿವಣ್ಣ ಹಾಗೂ ಪವನ್ ಒಡೆಯರ್ ಕಾಂ ಬೋದ ಈ ಸಿನಿಮಾಗೆ ಬೇಲ್ ಎಂಬ ಟೈಟಲ್ ಇಡಲಾಗಿದೆ. ಮಳೆಯಲ್ಲಿ ಛತ್ರಿ ಹಿಡಿದು ಶಿವಣ್ಣ ನಿಂತಿರುವ ಪೋಸ್ಟರ್ ಅಭಿಮಾನಿಗಳಲ್ಲಿ ಕುತೂಹಲ ಹೆಚ್ಚುವಂತೆ ಮಾಡಿದೆ. ಈ ಮಹತ್ವಾಕಾಂಕ್ಷೆ ಪ್ರಾಜೆಕ್ಟ್‌ನ್ನು ವೆಂಕಟ್ ಕೆ ನಾರಾಯ ಣ್ ತಮ್ಮದೇ ಕೆವಿಎನ್ ಪ್ರೊಡಕ್ಷನ್ ಬ್ಯಾನರ್‌ನಡಿ ನಿರ್ಮಾಣ ಮಾಡುತ್ತಿದ್ದಾರೆ. ಗೋವಿಂ ದಾಯ ನಮಃ, ಗೂಗ್ಲಿ, ರಣವಿಕ್ರಮ, ನಟ ಸಾರ್ವ ಭೌಮ, ರೇಮೋ ಸೇರಿದಂತೆ ಅನೇಕ ಸೂಪರ್ ಹಿಟ್ ಚಿತ್ರ ಕೊಟ್ಟಿರುವ ಪವನ್ ಒಡೆಯರ್ ನಿರ್ದೇಶನ ಮಾಡುತ್ತಿದ್ದಾರೆ.



## 'ರಸಾನುಭವ 2026'ದಲ್ಲಿ ಸಾಂಸ್ಕೃತಿಕ ನೃತ್ಯಕಲೆಗಳ ಸಂಗಮ

ಚೌಡಯ್ಯ ಮೆಮೋರಿಯಲ್ ಹಾಲ್ ನಲ್ಲಿ ನಟೇಶ ನೃತ್ಯಾಲಯ ಆಯೋಜಿಸಿದ್ದ ಭಾರತೀಯ ವಿವಿಧ ನೃತ್ಯ ಪ್ರಾಕಾರಗಳ ಸಂಗಮವಾಗಿ ಮೂಡಿಬಂದ 'ರಸಾನುಭವ 2026' ಕಾರ್ಯಕ್ರಮ ನೃತ್ಯ ಪ್ರಿಯರ ಗಮನ ಸೆಳೆಯಿತು. ವೇದಿಕೆಯಲ್ಲಿ ಶನಿ ವಾರ ಬೆಳಗಿನಿಂದ ಸಂಜೆವರೆಗೆ ನಡೆದ ಶ್ರೀ ಹರಿ ಮತ್ತು ತಂಡದಿಂದ ಕಥಕ್ ಪ್ರದರ್ಶನ, ನಯನಾ ಶ್ರೀನಿವಾಸನ್ ಅವರ ಭರತನಾಟ್ಯ, ದೇವೇಶ್ ನಾಯರ್ ಅವರ ಕುಚಿಪುಡಿ ನೃತ್ಯ ಮತ್ತು ಐಶ್ವರ್ಯ ಅವರ ಒಡಿಸಿ ನೃತ್ಯ ಪ್ರದರ್ಶನ ಗಮನ ಸೆಳೆದವು. ಅಲ್ಲದೆ "ಪ್ರದರ್ಶನ ಕಲೆಗಳಲ್ಲಿ ಉದ್ಯೋಗಾವಕಾಶಗಳು" ಎಂಬ ವಿಷಯದ ಮೇಲೆ ನಡೆದ ಚರ್ಚೆಯಲ್ಲಿ ಡಾ.ಪ್ರಿಯಾ ಶ್ರೀ ರಾವ್ ಭಾಗವಹಿಸಿ, ಪ್ರದ ರ್ಶನ ಕಲೆಗಳ ಕ್ಷೇತ್ರದಲ್ಲಿ ವೃತ್ತಿ ನಿರ್ಮಾಣದ ಸಾಧ್ಯತೆಗಳು, ಸವಾಲುಗಳು ಮತ್ತು ಭವಿಷ್ಯದ ದಿಕ್ಕುಗಳ ಕುರಿತು ತಮ್ಮ ಅಭಿಪ್ರಾಯ ಹಂಚಿಕೊಂಡರು.



## ಸಾಮಾಜಕ್ಕೆ ಉತ್ತಮ ಸಂದೇಶ ಹೊತ್ತು ತರುತ್ತಿರುವ 'ಧೃತಿ'

ಚಿತ್ರ ನಿರ್ದೇಶನ ಹಲವು ಪ್ರತಿಭೆಗಳ ಕನಸು. ಅದು ಕೆಲವರಿಗೆ ನನಸಾಗುತ್ತದೆ. ಕೆಲವರಿಗೆ ಕನಸಾಗಿಯೇ ಉಳಿಯುತ್ತದೆ. ಉದ್ಯಮಿ ಜಗದೀಶ್ ಕೂಡ ಚಿಕ್ಕಂದಿನಿಂದಲೂ ನಿರ್ದೇಶಕನಾಗುವ ಕನಸು ಹೊತ್ತವರು. ಆ ಕನಸನ್ನು "ಧೃತಿ" ಚಿತ್ರವನ್ನು ನಿರ್ದೇಶಿಸುವ ಮೂಲಕ ನನಸಾಗಿಸಿಕೊಂಡಿದ್ದಾರೆ ಜಗದೀಶ್. ಸಮಾಜಕ್ಕೆ ಒಂದೊಳ್ಳೆ ಸಂದೇಶ ನೀಡುವ "ಧೃತಿ" ಚಿತ್ರದ ಕುರಿತು ನಿರ್ದೇಶಕ ಜಗದೀಶ್ ಹಾಗೂ ಚಿತ್ರತಂಡದವರು ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದು ಹೀಗೆ. ನಾನೊಬ್ಬ ಉದ್ಯಮಿ. ಚಿಕ್ಕಂದಿನಿಂದಲೂ ಚಿತ್ರ ನಿರ್ದೇಶನ ಮಾಡಬೇಕೆಂಬ ಆಸೆ ನನಗೆ. ಅದು ಈಗ ಈ ಚಿತ್ರದ ಮೂಲಕ ಈಡೇರಿದೆ.



## ತೆರೆಗೆ ಬರಲು ಸಿದ್ಧ 'ಸರ್ಕಾರಿ ನ್ಯಾಯಬೆಲೆ ಅಂಗಡಿ'

ಸಾಮಾಜಿಕ ಕಥಾಹಂದರವನ್ನು ಇಟ್ಟುಕೊಂಡು ತಯಾರಾಗಿರುವ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರ ಇದೀಗ ತೆರೆಗೆ ಬರಲು ಸಿದ್ಧವಾಗಿದೆ. ಈಗಾಗಲೇ ತನ್ನ ಬಹುತೇಕ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನು ಮುಗಿಸಿರುವ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದ ಶೀರ್ಷಿಕೆ ಗೀತೆ ಇತ್ತೀಚೆಗೆ ಬಿಡುಗಡೆಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಚಿತ್ರದ ಶೀರ್ಷಿಕೆ ಗೀತೆಯನ್ನು ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಸಿನಿಮಾದ ಹೆಸರೇ ಹೇಳುವಂತೆ, ಇದು 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಮತ್ತು ಪಡಿತರ ವ್ಯವಸ್ಥೆಯ ಸುತ್ತ ನಡೆಯುವಂಥ ಕಥಾಹಂದರದ ಚಿತ್ರ. ಈ ಚಿತ್ರದ ಸಂಪೂರ್ಣ ಚಿತ್ರೀಕರಣವನ್ನು ಮಂಡ್ಯ ಜಿಲ್ಲೆಯಲ್ಲೇ ನಡೆಸಿರುವುದು ವಿಶೇಷ.



## ಎಜುಕೇಟಡ್ ಬುಲ್ಸ್ ಟ್ರೈಲರ್

ಕಳೆದ ನಾಲ್ಕು ದಶಕಗಳಿಂದ ಡಾ.ಅಂಬ ರೀಷ್, ದೇವರಾಜ್, ಜಗ್ಗೇಶ್ ಶಶಿಕುಮಾರ್ ಮುಂತಾದ ಸ್ಟಾರ್ ನಟರ ಚಿತ್ರಗಳಿಗೆ ಆಕ್ಷನ್ ಕಟ್ ಹೇಳಿರುವ ಹಿರಿಯ ತಂತ್ರಜ್ಞ ಜಿ.ಕೆ. ಮುದ್ದುರಾಜ್ ಅವರು ಹತ್ತು ವರ್ಷಗಳ ನಂತರ ನಿರ್ದೇಶಿಸಿರುವ ಚಿತ್ರ ಎಜುಕೇಟಡ್ ಬುಲ್ಸ್. ಈ ಚಿತ್ರದ ಚಿತ್ರಕತೆ ಬರೆದು ಆಕ್ಷನ್ ಕಟ್ ಹೇಳುವ ಜತೆಗೆ ಎಂ.ಎಸ್. ಎಂಟರ್ ಪ್ರೈಸಸ್ ಲಾಂಛನದಲ್ಲಿ ನಿರ್ಮಾಣ ಮಾಡಿದ್ದಾರೆ. ಮುದ್ದುರಾಜ್ ಅವರ ನಿರ್ದೇಶನದ 41ನೇ ಚಿತ್ರ ಇದಾಗಿದ್ದು ಇದರ ಟ್ರೈಲರ್ - ಹಾಡುಗಳ ಬಿಡುಗಡೆ ಸಮಾರಂಭ ನಡೆಯಿತು. ನೀರಜ್, ಪೂರ್ವಿಕಾ (ಸ್ವಪ್ನ) ಚಿತ್ರದ ನಾಯಕ, ನಾಯಕಿಯಾಗಿ ನಟಿಸಿ ದ್ದು, ಅಜಯ್ ಕುಮಾರ್, ತೇಜಸ್ ಕುಮಾರ್, ರಾಕೇಶ್ ಅಲ್ಲ ದೆ ಪಾಪ ಪಾಂಡು ಖ್ಯಾತಿಯ ಚಿದಾನಂದ್, ಹಿರಿಯ ನಟಿ ಭವ್ಯ ಉಳಿದ ಪಾತ್ರಗಳಲ್ಲಿ ನಟಿಸಿದ್ದಾರೆ. ಈ ಸಂದರ್ಭದಲ್ಲಿ ನಿರ್ದೇಶಕ ಮುದ್ದುರಾಜ್ ಮಾತನಾಡಿ ಎಜುಕೇಟೆಡ್ ಬುಲ್ಸ್ ಎಂದರೆ ವಿದ್ಯಾವಂತ ಗೂಡೆಗಳು ಎಂದರ್ಥ. ಎಲ್ಲಾ ಕಲಾವಿದರು ಹೊಸಬರು ಅಭಿನಯಿಸಿದ್ದಾರೆ ಎಂದರು.
















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021